# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **466** |
| ಸದಸ್ಯರ ಹೆಸರು | : | ಶ್ರೀಮತಿ ಹೇಮಲತಾ ನಾಯಕ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 10-03-2025 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ರೈತರುಗಳು ವಿದ್ಯುತ್ ಕೊರತೆಯ ಕಾರಣದಿಂದ ನೀರಾವರಿ ಸಮಸ್ಯೆಗೆ ಒಳಗಾಗಿ ತೊಂದರೆಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ರೈತರೂ ಸೇರಿದಂತೆ ಎಲ್ಲಾ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಸರ್ಕಾರದ ಆದೇಶದನ್ವಯ ದಿನವಹಿ 7 ಗಂಟೆಗಳ ಕಾಲ 3 ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. |
| ಆ) | ಈ ವರ್ಗಗಳ ರೈತರಿಗೆ ಸೌರಶಕ್ತಿ ಚಾಲಿತ ಪಂಪುಗಳನ್ನು ಅಳವಡಿಸಿ ಅನುಕೂಲ ಮಾಡಿಕೊಡಲು ಸರ್ಕಾರ ಯೋಜನೆ ಹಾಕಿಕೊಂಡಿದೆಯೇ; | ಕುಸುಮ್-ಬಿ ಯೋಜನೆ ಅಡಿಯಲ್ಲಿ ಎಲ್ಲಾ ವರ್ಗಗಳ ರೈತರು ಅರ್ಜಿ ನೋಂದಾಯಿಸಿ, ಸೌರಶಕ್ತಿ ಚಾಲಿತ ಪಂಪುಗಳನ್ನು ಅಳವಡಿಸಿಕೊಳ್ಳಬಹುದಾಗಿರುತ್ತದೆ. |
| ಇ) | ಕೊಪ್ಪಳ ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ವರ್ಗಗಳ ಜನರಿಗೆ ಈ ಸೌರಶಕ್ತಿ ಸೌಲಭ್ಯವನ್ನು ಯಾವ ಮಿತಿಯೊಳಗೆ ಒದಗಿಸಲಾಗುವುದು? | ಕೇಂದ್ರ ಸರ್ಕಾರದ PM KUSUM – B ಯೋಜನೆಯಡಿ ರಾಜ್ಯದಲ್ಲಿ ಅಳವಡಿಸಲು ಮಂಜೂರು ಮಾಡಿರುವ 40000 ಸೌರಪಂಪ್ ಸೆಟ್‌ಗಳನ್ನು 31-12-2025 ರೊಳಗೆ ಅನುಷ್ಠಾನಗೊಳಿಸಲು ಸೂಚಿಸಿರುತ್ತಾರೆ. ಅದರಂತೆ, ಕೊಪ್ಪಳ ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ವರ್ಗಗಳ ರೈತರು ಸಹ ಅರ್ಜಿ ನೋಂದಾಯಿಸಿದಲ್ಲಿ ಸೌರಶಕ್ತಿ ಸೌಲಭ್ಯವನ್ನು ಒದಗಿಸಲಾಗುವುದು. |

ಸಂಖ್ಯೆ: ಎನರ್ಜಿ 49 ಇಬಿಎಸ್ 2025

(ಕೆ.ಜೆ.ಜಾರ್ಜ್) 7/3/25
ಇಂಧನ ಸಚಿವರು